05–2014 ರಂದು ಪೋಲೀಸ ಇಲಾಖೆ ಅಧಿಕಾರಿಗಳು ದಾಳಿ ಮಾಡಿ ಮಾಲನ್ನು ವಶಪಡಿಸಿಕೊಂಡು ಕಲಬುರಗಿ ಚೌಕ ಪೋಲೀಸ್ ಠಾಣೆಯಲ್ಲಿ ಗುನ್ನೆ ನಂ 75/2014 ರಂತೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿರುತ್ತಾರೆ.

ಸದರಿ ಪ್ರಕರಣದ ತನಿಖೆಯಲ್ಲಿ ಯಾವುದೇ ಆರೋಪಿ ಪತ್ತೆಯಾಗಿರದ ಮತ್ತು ಸಾಕ್ಷಾಧಾರಗಳು ಲಭ್ಯವಾಗದ ಕಾರಣ ದಿ: 27–06–2014 ರಂದು ಕಲಬುರಗಿ 3 ನೇ ಹೆಚ್ಚುವರಿ ಜೆ.ಎಂ.ಎಫ್.ಸಿ. ನ್ಯಾಯಾಲಯ ಅಂತಿಮ ವರದಿ ಸಲ್ಲಿಸಿರುತ್ತಾರೆ.

ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಈ ರೀತಿ ಪ್ರಕರಣಗಳು ಮರುಕಳಿಸಿದಂತೆ ಎಚ್ಚರಿಕೆ ವಹಿಸಲು ಸೂಚಿಸಿ ಪತ್ರ ಬರೆಯಲಾಗಿದೆ.

ಬಹುಗ್ರಾಮ ಕುಡಿಯುವ ನೀರು ಯೋಜನೆ

1371(1311); ಶ್ರೀ ದೊಡ್ಡಮನಿ ರಾಮಕೃಷ್ಣ ಸಿದ್ದಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗತ್ತಿಕೊಂಡಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳು ಪ್ರಸ್ತುತ ಯಾವ ಹಂತದಲ್ಲಿವೆ;

ಆ) ಈ ಯೋಜನೆಯಡಿಯಲ್ಲಿ ಎಷ್ಟು ಗ್ರಾಮಗಳನ್ನು ಒಳಪಡಿಸಲಾಗಿದೆ.

ಇ) ಯೋಜನೆಯ ಶೀಘ್ರ ಅನುಷ್ಠಾನಕ್ಕಾಗಿ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು?

ಶ್ರೀ ಹೆಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)

ಅ) ಶಿರಹಟ್ಟಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕೈಗೆತ್ತಿಕೊಂಡಿರುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪ್ರಸ್ತುತ ಹಂತಗಳು ಈ ಕೆಳಕಂಡಂತಿವೆ;

ಕ್ರ ಸಂ.	ಯೋಜನೆಯ ಹೆಸರು	ಪ್ರಸ್ತುತ ಹಂತ
1.	ಬಿದರಳ್ಳಿ ಮತ್ತು ಇತರೆ 7 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆ.	ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸುವಲ್ಲಿ ವಿಫಲರಾದ್ದರಿಂದ ಸದರಿ ಕಾಮಗಾರಿಯನ್ನು ಗುತ್ತಿಗೆದಾರರ ಹೊಣೆಗಾರಿಕೆ ಮೇರೆಗೆ ಗುತ್ತಿಗೆ ರದ್ದತಿ ಜಾರಿಯಲ್ಲಿರುತ್ತದೆ.
2.	ಕಕ್ಕರೂ ಮತ್ತು ಇತರೆ 4 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆ.	ಕಾಮಗಾರಿಯು ಪೂರ್ಣಗೊಂಡು ಪ್ರಾಯೋಗಿಕ ಕಾರ್ಯಚರಣೆ ಹಂತದಲ್ಲಿದೆ.
3.	ಲಕ್ಷ್ಮೇಶ್ವರ ಮತ್ತು ಇತರೆ 7 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರಿನ ಯೋಜನೆ.	ಸದರಿ ಕಾಮಗಾರಿಯನ್ನು KUWS & DB ಇಲಾಖಾ ವತಿಯಿಂದ ಪೂರ್ಣಗೊಳಿಸಲಾಗಿದ್ದು, ಪ್ರಾಯೋಗಿಕ ಕಾರ್ಯಚರಣೆ ಹಂತದಲ್ಲಿದೆ.
ಜಲ ನಿರ್ಮಲ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ವಿವರ		
1.	ಶಿರಹಟ್ಟಿ ತಾಲ್ಲೂಕಿನ 38 ಗ್ರಾಮಗಳಿಗೆ ಜಲನಿರ್ಮಲ ಯೋಜನೆಯ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಶೇ 60ರಷ್ಟು ಪೂರ್ಣಗೊಂಡಿರುತ್ತದೆ ಹಾಗೂ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ.	

ಈಗಾಗಲೇ ಗದಗ ಜಿಲ್ಲೆಯ ಎಲ್ಲಾ 342 ಜನವಸತಿಗಳಿಗೆ DBOT ಯೋಜನೆಯಡಿ 70 LPCD ಯಂತೆ ಸನ್ 2047ನೇ ಇಸವಿಯ ಪ್ರಚಲಿತ ಜನಸಂಖ್ಯೆಗೆ ಅನುಕೂಲವಾಗುವಂತೆ ಗದಗ ಜಿಲ್ಲೆಯ ನೀರು ಸರಬರಾಜು ಮಾಡಲು ಉದ್ದೇಶಿಸಿದ್ದು, DBOT ಟೆಂಡರ್ ಪ್ರಕ್ರಿಯೆ ನಡೆದಿದೆ. ಸದರಿ 342 ಜನವಸತಿಗಳಲ್ಲಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರ ವಾಪ್ತಿಯ ಉಳಿದ ಎಲ್ಲಾ ಜನವಸತಿಗಳು ಸಹ ಸೇರಿರುತ್ತವೆ. ಇದರಲ್ಲಿ, ಮೇಲ್ಕಂಡ ಬಿದರಹಳ್ಳಿ ಮತ್ತು ಇತರೆ 7 ಗ್ರಾಮಗಳು ಸೇರಿವೆ.

ಆ) ಜಲ ನಿರ್ಮಲ ಯೋಜನೆಯಡಿಯಲ್ಲಿ 38 ಗ್ರಾಮಗಳನ್ನು ಒಳಪಡಿಸಲಾಗಿದೆ. ಬಾಕಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಎಲ್ಲಾ ಜನವಸತಿಗಳು ಸಹಾ DBOT ಯೋಜನೆಯಡಿ ಸೇರಿರುತ್ತವೆ.

ಇ) ಜಲ ನಿರ್ಮಲ ಯೋಜನೆಯ ಕಾಮಗಾರಿಗಳು ಕರಾರು ಒಪ್ಪಂದದ ಪ್ರಕಾರ ದಿನಾಂಕ:30.06.2014 ರಂದು ಮುಕ್ತಾಯಗೊಂಡಿರುತ್ತವೆ. ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸುವ ಸಲುವಾಗಿ ಕರಾರು ಒಪ್ಪಂದದ ವಿಸ್ತರಣೆಯ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಅಂಗನವಾಡಿ ಕಟ್ಟಡಗಳು

1372(1312); ಶ್ರೀ ದೊಡ್ಡಮನಿ ರಾಮಕೃಷ್ಣ ಸಿದ್ದಲಿಂಗಪ್ಪ (ಶಿರಹಟ್ಟಿ)

ಅ) ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ;

ಆ) ಅವುಗಳಲ್ಲಿ ಎಷ್ಟು ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿವೆ;

ಇ) ಸ್ವಂತ ಕಟ್ಟಡ ಇಲ್ಲದೇ ದೇವಸ್ಥಾನ/ ಬಾಡಿಗೆ ಕಟ್ಟಡದಲ್ಲಿ ನಡೆಯುವ ಕೇಂದ್ರಗಳಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಸ್ವಂತ ಕಟ್ಟಡ ನಿರ್ಮಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು?

ಶ್ರೀಮತಿ ಉಮಾಶ್ರೀ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 227 ಅಂಗನವಾಡಿ ಕೇಂದ್ರಗಳಿವೆ.

ಆ) ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿರುವ ಅಂಗನವಾಡಿ ಕೇಂದ್ರಗಳ ಪೈಕಿ 160 ಕೇಂದ್ರಗಳು ಸ್ವಂತ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿವೆ.